JUNE 22, 2025

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಅಧಿಕಾರ ವಹಿಸಿಕೊಂಡ ಬಳಿಕ, ಕಳೆದ 11 ವರ್ಷಗಳಲ್ಲಿ, ದೇಶದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನಡೆದಿವೆ. ರಾಜಕೀಯ ಸ್ಥಿರತೆ, ಸುದೃಢ ನಾಯಕತ್ವ ಹಾಗೂ ಸ್ಥಿರ ಸರ್ಕಾರದಿಂದ, ದೇಶ ನಾಲ್ಕನೆ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆದಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಕೇಂದ್ರ ಸರ್ಕಾರ 11 ವರ್ಷ ಪೂರೈಸಿರುವ ಹಿನ್ನೆಲೆ, ಹುಬ್ಬಳ್ಳಿ–ಧಾರವಾಡ ಮಹಾನಗರ, ಬಿಜೆಪಿ ಜಿಲ್ಲಾ ಘಟಕ, ಹುಬ್ಬಳ್ಳಿ ಕುಸುಗಲ ರಸ್ತೆಯ ಶ್ರೀನಿವಾಸ ಗಾರ್ಡನ ನಲ್ಲಿ ಆಯೋಜಿಸಿದ, ವಿಕಸಿತ ಭಾರತ ಸಂಕಲ್ಪ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ವಿಶ್ವ ಬ್ಯಾಂಕ್– ಐಎಂಎಫ್ ವರದಿ ಪ್ರಕಾರ, ದೇಶದಲ್ಲಿ 26 ಕೋಟಿ ಜನರು, ಕಡು ಬಡತನದಿಂದ ಹೊರ ಬಂದಿದ್ದಾರೆ ಎಂದರು.

<><><>

ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ, 6 ಲಕ್ಷ ಹೆಕ್ಟರ್ ಪ್ರದೇಶದಲ್ಲಿ, ಕಬ್ಬು ಬೆಳೆಯಲಾಗುತ್ತಿದೆ. ಉತ್ತಮ ಮಳೆ ಆಗುತ್ತಿದ್ದು, 1 ಲಕ್ಷ ಹೆಕ್ಟರ್ ಹೆಚ್ಚುವರಿ ಕಬ್ಬು ಬೆಳೆಯನ್ನು ನಿರೀಕ್ಷಿಸಲಾಗಿದ್ದು, ಸಕ್ಕರೆ ಕಾರ್ಖಾನೆಗಳಿಗೆ, ಕಬ್ಬಿನ ಕೊರತೆಯಾಗದು ಎಂದು, ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಖಾತೆ ಸಚಿವ, ಶಿವಾನಂದ ಪಾಟೀಲ ತಿಳಿಸಿದ್ದಾರೆ. ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ವತಿಯಿಂದ, ಸಕ್ಕರೆ ಕಾರ್ಖಾನೆಗಳಿಗೆ, ಪ್ರಶಸ್ತಿ ಪ್ರದಾನ ಮಾಡಿ, ಮಾತನಾಡಿದರು. ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ, ಮದ್ಯಸಾರ ಮತ್ತು ಸಕ್ಕರೆ ತಂತ್ರಜ್ಞಾನದಲ್ಲಿ, ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸ್‌ಗಳನ್ನು ಆರಂಭಿಸಲು, 20 ಕೋಟಿ ರೂಪಾಯಿ ವೆಚ್ಚದಲ್ಲಿ, ನೂತನ ಕಾಲೇಜು ಕಟ್ಟಡ ನಿರ್ಮಿಸಲಾಗುವುದು ಎಂದು, ಸಚಿವರು ತಿಳಿಸಿದರು.

<><><>

ಭಾರತದಲ್ಲಿ ವಿಕಾಸಗೊಂಡ ಯೋಗವು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಶಯದಂತೆ, ಜಾಗತಿಕ ಆರೋಗ್ಯ ಹಾಗೂ ಶಾಂತಿಯನ್ನು ಉತ್ತೇಜಿಸುವ ಸಾಧನವಾಗಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲೂಕಿನ ಐತಿಹಾಸಿಕ, ಯುನೆಸ್ಕೋ ವಿಶ್ವ ಪಾರಂಪರಿಕ ತಾಣವಾದ ಪಟ್ಟದಕಲ್ಲು ಪರಿಸರದಲ್ಲಿ ಆಯೋಜಿತ, 11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಧ್ವನಿ: ಪ್ರಲ್ಹಾದ್ ಜೋಶಿ 37 ಸೆಕೆಂದುಗಳು

<><><>

ಧಾರವಾಡ ಜಿಲ್ಲೆಯ ಕೆರೆಗಳು, ಕುಡಿಯುವ ನೀರಿನ ಮೂಲಗಳಾಗಿದ್ದು, ಸುರಕ್ಷಿತ ತಡೆಗೋಡೆಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವುದಾಗಿ, ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ಧಾರವಾಡ ಜಿಲ್ಲೆ, ಕುಂದಗೋಳ ತಾಲೂಕು, ಯರಿನಾರಾಯಣಪುರ ಗ್ರಾಮದ ಕೆರೆಯಲ್ಲಿ, ಆಕಸ್ಮಿಕವಾಗಿ ಮುಳುಗಿ ಮೃತಪಟ್ಟ, ಮಕ್ಕಳ ಮನೆಗೆ ತೆರಳಿ, ಸಂತೋ ಲಾಡ್ ಫೌಂಡೇಶನ್ ನಿಂದ, ಮಕ್ಕಳ ಕುಟುಂಬಕ್ಕೆ, 4 ಲಕ್ಷ ರೂಪಾಯಿ ನೀಡಿ, ಕುಟುಂಬಕ್ಕೆ ಸಚಿವರು ಸಾಂತ್ವನ ಹೇಳಿದರು. ಮಳೆಗಾಲದ ಹಿನ್ನೆಲೆ, ಗ್ರಾಮೀಣ ಭಾಗದ ಕೆರೆಗಳು ಭರ್ತಿಯಾಗಿವೆ. ಕೆರೆ ಸುತ್ತಮುತ್ತ ಮಕ್ಕಳು ಓಡಾಡದಂತೆ, ಎಲ್ಲರೂ ಮುಂಜಾಗ್ರತೆ ವಹಿಸಬೇಕು. ಅಮೂಲ್ಯ ಜೀವಗಳನ್ನು ಕಾಪಾಡಬೇಕು ಎಂದು, ಮನವಿ ಮಾಡಿದರು.

<><><>

ಧಾರವಾಡ, ಕೆ.ಎಲ್.ಇ ಸಂಸ್ಥೆಯ ಶ್ರೀ ಮೃತ್ಯುಂಜಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 141 ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ ಅಧ್ಯಕ್ಷ ಲಿಂಗರಾಜ ಅಂಗಡಿ ಹಾಗೂ ಗಣ್ಯರು, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು, ನಾಡಿಗೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

<><><>

ಶಿವಮೊಗ್ಗ ಜಿಲ್ಲೆಯ, ಶರಾವತಿ ಸಂತ್ರಸ್ಥರ ಸಮೀಕ್ಷಾ ಕಾರ್ಯ, ಶೇಕಡ 75 ರಷ್ಟು ಪೂರ್ಣಗೊಂಡಿದ್ದು, ಶೇಕಡ 25 ರಷ್ಟು ಬಾಕಿ ಇದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇನ್ನೂವರೆಗೆ ಸಮೀಕ್ಷೆಗೆ ಒಳ ಪಡದ ಸಂತ್ರಸ್ಥರು, ಭಯಪಡುವ ಅವಶ್ಯಕತೆ ಇಲ್ಲ. ಸಮಗ್ರವಾಗಿ ಅವಲೋಕಿಸಿ, ಸಮೀಕ್ಷೆ ಪೂರ್ಣಗೊಂಡ ಬಳಿಕ, ಪುನರ್ವಸತಿ ಪರಿಹಾರದ ಬಗ್ಗೆ, ಕೇಂದ್ರ ಸರ್ಕಾರದೊಂದಿಗೆ ಸಮಾಲೋಚಿಸಿ, ರಾಜ್ಯ ಸರ್ಕಾರ ಶಾಶ್ವತ ಪರಿಹಾರ ಕಲ್ಪಿಸಲಿದೆ ಎಂದರು.

<><><>

ಕೇಂದ್ರದ ಬೆಳೆ ವಿಮೆ ಯೋಜನೆಯಡಿ, ಕಳೆದ ವ ೯, ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ, ಕೇವಲ 74 ಸಾವಿರ ರೈತರು, 35 ಕೋಟಿ ರೂಪಾಯಿ, ಬೆಳೆ ನಷ್ಟ ವಿಮಾ ಹಣ ಪಡೆದಿದ್ದಾರೆ ಎಂದು, ಸಂಸದ ಕೆ.ಸುಧಾಕರ್ ತಿಳಿಸಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ಕೃಷಿ ಇಲಾಖೆ, 2025 ರ ಮುಂಗಾರು ಹಂಗಾಮಿನ, ಕರ್ನಾಟಕ ರೈತ ಸುರಕ್ಷಾ, ಪ್ರಧಾನಮಂತ್ರಿ ಫಸಲ ಬಿಮಾ ಯೋಜನೆ ಅನುಷ್ಠಾನಗೊಳಿಸಿದೆ. ರೈತರು ಟೊಮ್ಯಾಟೋ ಹಾಗೂ ತೊಗರಿ ಬೆಳೆಗಳ ವಿಮೆಗೆ ಜುಲೈ 15 ರೊಳಗೆ ನೋಂದಾಯಿಸುವಂತೆ ಕೋರಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>